**APRIL 08 2024**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ರಾಜ್ಯದ ಮೊದಲ ಹಂತದ ಲೋಕಸಭಾ ಚುನಾವಣೆಗೆ ನಾಮಪತ್ರ ವಾಪಸ್ ಪಡೆಯಲು ಇಂದು ಕೊನೆಯ ದಿನ.**
- **ಲೋಕಸಭಾ ಚುನಾವಣೆ; ವಿವಿಧ ಪಕ್ಷಗಳಿಂದ ಮುಂದುವರೆದ ಪ್ರಚಾರ ಕಾರ್ಯ.**
- **ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಧಿಕಾರಿಗಳಿಂದ ಕಟ್ಟುನಿಟ್ಟಿನ ಕ್ರಮ.**
- **ರಾಜ್ಯದ ವಿವಿಧೆಡೆ ಮತದಾನ ಹೆಚ್ಚಳಕ್ಕೆ ಸ್ವೀಪ ಸಮಿತಿಯಿಂದ ವೈವಿಧ್ಯಮಯ ಕಾರ್ಯಕ್ರಮ.**

**ಈಗ ವಾರ್ತೆಗಳ ವಿವರ**

**ರಾಜ್ಯದಲ್ಲಿ ಇದೇ 26 ರಂದು ನಡೆಯಲಿರುವ ಮೊದಲ ಹಂತದ ಲೋಕಸಭಾ ಚುನಾವಣೆಗೆ ಒಟ್ಟು 14 ಕ್ಷೇತ್ರಗಳಲ್ಲಿ 358 ಅಭ್ಯರ್ಥಿಗಳಿಂದ ಸಲ್ಲಿಕೆಯಾದ 492 ನಾಮಪತ್ರಗಳ ಪೈಕಿ 384 ನಾಮಪತ್ರಗಳು ಕ್ರಮಬದ್ಧವಾಗಿವೆ ಎಂದು ಮುಖ್ಯ ಚುನಾವಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಇಂದು ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದ್ದು, ಆ ಬಳಿಕ ಚುನಾವಣಾ ಕಣದಲ್ಲಿ ಉಳಿಯುವ ಅಭ್ಯರ್ಥಿಗಳ ಸ್ಪ ್ಟ ಚಿತ್ರಣ ದೊರೆಯಲಿದೆ.**

*******

**ಲೋಕಸಭಾ ಚುನಾವಣೆ ಹಿನ್ನೆಲೆ, ರಾಜ್ಯಾದ್ಯಂತ ವಿವಿಧ ಪಕ್ಷಗಳ ಮುಖಂಡರು ಬಿರುಸಿನ ಪ್ರಚಾರ ಕೈಗೊಂಡಿದ್ದಾರೆ. ಬೆಂಗಳೂರು ಉತ್ತರ ಲೋಕಸಭಾ ವ್ಯಾಪ್ತಿಯ ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ನಿನ್ನೆ ಆಯೋಜಿಸಲಾಗಿದ್ದ ಕಾಂಗ್ರೆಸ್ ಮಹಿಳಾ ಸಮಾವೇಶ ಮತ್ತು ಬೂತ್‌ಮಟ್ಟದ ಮುಖಂಡರುಗಳ ಸಭೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ಪಕ್ಷದ ಅಭ್ಯರ್ಥಿ ರಾಜೀವಗೌಡ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಗೆಲುವಿನ ಬಹುತೇಕ ಅವಕಾಶಗಳಿದ್ದು, ಉತ್ತಮ ತಿಳಿವಳಿಕೆ ಮತ್ತು ಜನಪರ ಸಿದ್ಧಾಂತವನ್ನು ಹೊಂದಿರುವ ಅಭ್ಯರ್ಥಿಗೆ ಜನತೆ ಬೆಂಬಲಿಸಬೇಕು ಎಂದು ಮನವಿ ಮಾಡಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರದ ವಿವಿಧ ವಸತಿ ಸಂಕೀರ್ಣಗಳಲ್ಲಿ ಸಹೋದರ ಡಿ.ಕೆ.ಸುರೇಶ್ ಪರ ಮತ ಪ್ರಚಾರ ನಡೆಸಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದ ರಾಜ್ಯದಲ್ಲಿ ಹಲವಾರು ಜನಪರ ಯೋಜನೆಗಳನ್ನು ಜಾರಿಗೊಳಿಸಿದೆ ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಡೆದ ಕಾಂಗ್ರೆಸ್ ಚುನಾವಣಾ ಪ್ರಚಾರ ಸಭೆಯಲ್ಲಿ, ಅಭ್ಯರ್ಥಿ ರಕ್ಷಾ ರಾಮಯ್ಯ ಪರ ಪ್ರಚಾರ ನಡೆಸಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿ, ರಾಜ್ಯ ಸರ್ಕಾರ ನೀಡಿದ್ದ ಭರವಸೆಯಂತೆ ಐದು ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿದ್ದು, ಜನತೆ ಕಾಂಗ್ರೆಸ್ ಪರವಾಗಿದೆ ಎಂದರು. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶೋಭಾ ಕರಂದ್ಲಾಜೆ ಬೆಂಗಳೂರಿನ ಮಹಾಲಕ್ಷ್ಮೀ ಬಡಾವಣೆ ಸೇರಿದಂತೆ ಹಲವು ಪ್ರದೇಶಗಳಲ್ಲಿ ಮತ ಯಾಚನೆ ನಡೆಸಿದರು.**

ಬಳಿಕ ಮಾತನಾಡಿದ ಅವರು, ಕೇಂದ್ರ ಸರ್ಕಾರದ 10 ವ ´ಗಳ ಸಾಧನೆಯನ್ನು ಜನತೆ ಈ ಬಾರಿಯ ಚುನಾವಣೆಯಲ್ಲಿ ಗಣನೆಗೆ ತೆಗೆದುಕೊಳ್ಳಲಿದ್ದು, ಸಶಕ್ತ ದೇಶ ನಿರ್ಮಾಣಕ್ಕಾಗಿ ಮತ ಚಲಾಯಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸಮಾಜದ ಪ್ರತಿಯೊಬ್ಬರೂ ಅಭಿವೃದ್ಧಿಯಾಗಬೇಕೆಂಬ ನಿಟ್ಟಿನಲ್ಲಿ ಸರಕಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಲ್ಲಿ ನಿನ್ನೆ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ರಾಜ್ಯ ಸರಕಾರದ ಉತ್ತಮ ಯೋಜನೆಗಳನ್ನು ಜನತೆ ಗುರುತಿಸಿದೆ. ಕರಾವಳಿಯಲ್ಲೂ ಈ ಬಾರಿ ಕಾಂಗ್ರೆಸ್‌ಗೆ ಪೂರಕ ವಾತಾವರಣ ನಿರ್ಮಾಣವಾಗಿದೆ. ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪದ್ಮರಾಜ್ ಆರ್ ಅವರ ಪರ ಜನತೆಯ ಒಲವು ವ್ಯಕ್ತವಾಗುತ್ತಿದೆ ಎಂದರು.

*******

ಲೋಕಸಭಾ ಚುನಾವಣೆ ಹಿನ್ನೆಲೆ, ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. ಮೇ 7 ರಂದು ಜರುಗಲಿರುವ ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆ, ಗದಗ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಜಿಲ್ಲೆಯ ಶಿರಹಟ್ಟಿಯಲ್ಲಿ ಸ್ಥಾಪಿಸಲಾಗಿರುವ ಭದ್ರತಾ ಕೊಠಡಿ ಮತ್ತು ಶಿರಹಟ್ಟಿ ತಾಲ್ಲೂಕಿನ ಗೋವನಾಳ ಮತ್ತು ರಾಮಗೇರಿ ಗ್ರಾಮಗಳ ಹೊರವಲಯದಲ್ಲಿರುವ ಚೆಕ್‌ಪೋಸ್ಟ್‌ಗಳಿಗೆ ಭೇಟಿ ನೀಡಿ, ಪರಿಶೀಲಿಸಿದರೆ, ಗದಗ ಜಿಲ್ಲೆಯ ನರಗುಂದ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ ಬಿರಾದಾರ್ ನರಗುಂದ ವಿಧಾನಸಭಾ ಕ್ಷೇತ್ರದ ಚುನಾವಣೆ ತರಬೇತಿ ಕೇಂದ್ರ ಹಾಗೂ ಕೊಣ್ಣೂರ ಚೆಕ್‌ಪೋಸ್ಟಗೆ ಭೇಟಿ ನೀಡಿ, ಸೂಕ್ತ ದಾಖಲೆಗಳಿಲ್ಲದೇ ವಾಹನಗಳಲ್ಲಿ ಹಣ, ಮದ್ಯ, ಚಿನ್ನಾಭರಣ ಹಾಗೂ ವಾಣಿಜ್ಯ ಸರಕುಗಳನ್ನು ಸಾಗಾಟ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ಸಿಬ್ಬಂದಿಗೆ ಸೂಚಿಸಿದರು.

ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡವರು ತಮ್ಮ ಜವಾಬ್ದಾರಿಯನ್ನು ಅತ್ಯಂತ ಪ್ರಾಮಾಣಿಕವಾಗಿ ನಿರ್ವಹಿಸಬೇಕು. ನಿರ್ಲಕ್ಷ್ಯ ವಹಿಸಿದಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಯಾದಗಿರಿ ಜಿಲ್ಲೆಯ ಸುರಪುರ ಚುನಾವಣಾಧಿಕಾರಿ ಕಾವ್ಯರಾಣಿ ಎಚ್ಚರಿಕೆ ನೀಡಿದ್ದಾರೆ. ಚೆಕ್ ಪೋಸ್ಟನಲ್ಲಿ ಸಾಗುವ ವಾಹನಗಳನ್ನು ಕಡ್ಡಾಯವಾಗಿ ತಪಾಸಣೆ ಮಾಡಬೇಕು. 50 ಸಾವಿರ ರೂಪಾಯಿ ಮೇಲ್ಪಟ್ಟ ಹಣವಿದ್ದಲ್ಲಿ ಅವರಿಂದ ಸೂಕ್ತ ದಾಖಲೆಗಳನ್ನು ಪಡೆಯಬೇಕು. ಬ್ಯಾಂಕ್ ಅಧಿಕಾರಿಗಳು ಹಣ ಪಡೆದುಕೊಂಡ ಖಾತೆದಾರರಿಗೆ ಅಧಿಕೃತ ರಶೀದಿ ನೀಡಬೇಕು ಎಂದರು. ರಾಜಕೀಯ ನಾಯಕರು ಹೆಚ್ಚಾಗಿ ವಾಟ್ಸಾಪ್ ಬಳಸುತ್ತಿರುವುದರಿಂದ ಸಾಮಾಜಿಕ ಜಾಲತಾಣಗಳ ಮೇಲೆ ತೀವ್ರ ನಿಗಾ ವಹಿಸಬೇಕು ಎಂದು ಮೀಡಿಯಾ ಮಾನಿಟರಿಂಗ್ ಸೆಲ್ ಸಿಬ್ಬಂದಿಗೆ ಮಾಧ್ಯಮ ಸಂಬಂಧಿತ ವಿ ´ಯಗಳ ಮೇಲ್ವಿಚಾರಣೆಯ ನೋಡಲ್ ಅಧಿಕಾರಿಗಳು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮಿತ್ ಪಾಟೀಲ ಕಲಬುರಗಿಯಲ್ಲಿ ಸೂಚಿಸಿದ್ದಾರೆ. ಲೋಕಸಭಾ ಚುನಾವಣೆ–2024 ಸಂದರ್ಭದಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಪ್ರಚಾರ ಕಾರ್ಯಕ್ಕೆ ಬಳಸಿಕೈಕೊಳ್ಳುವುದನ್ನು ನಿಷೇಧಿಸಲಾಗಿದೆ ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟದ ಅಧ್ಯಕ್ಷೆ ಜಾನಕಿ ಕೆ.ಎಂ ತಿಳಿಸಿದ್ದಾರೆ

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಲೋಕಸಭಾ ಚುನಾವಣೆ ಹಿನ್ನೆಲೆ ರಾಜ್ಯದ ವಿವಿಧೆಡೆ, ಮತದಾನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಮತದಾನದ ಪ್ರಕ್ರಿಯೆಯಲ್ಲಿ ಮತದಾರರು ಭಾಗವಹಿಸಿ, ತಮ್ಮ ಹಕ್ಕು ಚಲಾಯಿಸಿ ಎಂದು ಬಾಗಲಕೋಟೆ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಕರೆ ನೀಡಿದ್ದಾರೆ. ಬಳ್ಳಾರಿ ನಗರ ಪ್ರದೇಶದಲ್ಲಿ ಕಡಿಮೆಯಾಗುತ್ತಿರುವ ಮತದಾನದ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾನದ ಮಹತ್ವ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ನಿನ್ನೆ ಸೈಕಲ್ ಜಾಥಾ ನಡೆಯಿತು. ಮತದಾರರು ಉತ್ಸಾಹದಿಂದ ಭಾಗವಹಿಸಿ ಮತ ಚಲಾಯಿಸಬೇಕು ಎಂದು ಯಾದಗಿರಿ ಜಿಲ್ಲೆಯ ಸುರಪುರ ಚುನಾವಣಾಧಿಕಾರಿ ಕಾವ್ಯರಾಣಿ ಹೇಳಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನ ಪ್ರಬಲ ಅಸ್ತ್ರ. ಚುನಾವಣೆಗಳನ್ನು ಹಬ್ಬದ ರೀತಿ ಸಂಭ್ರಮಿಸಬೇಕು. ಪ್ರಜಾಪ್ರಭುತ್ವದ ಯಶಸ್ವಿಗೆ ಹಚ್ಚಿನ ಮತದಾನ ಅಗತ್ಯ ಸ್ವೀಪ್ ಸಮಿತಿ ಅಧಿಕಾರಿಗಳು ನಗರ ಮತ್ತು ಗ್ರಾಮೀಣ ಪ್ರದೇಶ ಸೇರಿದಂತೆ ಜನ ನಿಬಿಡ ಸ್ಥಳಗಳಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಆಯೋಜಿಸಿ ಜಾಗೃತಿ ಮೂಡಿಸಬೇಕು ಎಂದರು.

ಉಡುಪಿ – ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಲ್ಲಿ ಮೊದಲ ಹಂತದಲ್ಲಿ ಇದೇ 26 ಕ್ಕೆ ಚುನಾವಣೆ ನಡೆಯುತ್ತಿದ್ದು ಈ ಬಾರಿ ಜಿಲ್ಲೆಯಲ್ಲಿ ಶೇಕಡ 90ಕ್ಕೂ ಅಧಿಕ ಮತದಾನವಾಗಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ. ಶಿವಮೊಗ್ಗ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಿನ್ನೆ ಮತದಾನದ ಕುರಿತು ಜಾಗೃತಿ ಮೂಡಿಸಲು ಗೋಪಾಳದಲ್ಲಿನ ನಿವಾಸಿಗಳೊಂದಿಗೆ ಮತದಾನದ ಹಬ್ಬವನ್ನು ವಿನೂತನವಾಗಿ ಆಚರಿಸಲಾಯಿತು. ಮತದಾನದ ಹಬ್ಬದಲ್ಲಿ ಮಹಿಳೆಯರು ರಂಗೋಲಿ ಬಿಡಿಸಿದರು. ಈ ಸಂದರ್ಭದಲ್ಲಿ ಎಲ್ಲಾ ಮಹಿಳೆಯರಿಗೂ ಯುಗಾದಿ ಹಬ್ಬದ ಪ್ರಯುಕ್ತ ಅರಿಶಿಣ–ಕುಂಕುಮ ಕೊಡುವುದರ ಮೂಲಕ ಸಾಂಪ್ರದಾಯಿಕವಾಗಿ ಆಚರಿಸಲಾಯಿತು.

*******

ಭಾರತೀಯ ಅಂತರಿಕ್ಷ ಸಂಶೋಧನಾ ಸಂಸ್ಥೆ ಅಂತರಿಕ್ಷ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ಸೃಷ್ಟಿಸುತ್ತಿದೆ. ಭಾರತೀಯ ವಿಜ್ಞಾನಿಗಳು, ಸಂಶೋಧಕರು ನಡೆಸುತ್ತಿರುವ ಸಂಶೋಧನೆಗಳು ಮತ್ತು ಅಧ್ಯಯನಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡುವ ಆಕಾಶ ಮಂದಿರ ಪ್ರದರ್ಶನ ಎಂಬ ಹೊಸ ಕಾರ್ಯಕ್ರಮವನ್ನು ಬೆಂಗಳೂರಿನ ಜವಾಹರ್ ಲಾಲ್ ನೆಹರು ತಾರಾಲಯ ಪ್ರಾರಂಭಿಸಿದೆ. ಉಪಗ್ರಹಗಳ ಅಭಿವೃದ್ಧಿ, ಅವುಗಳ ಉಡ್ಡಯನ ಪ್ರಕ್ರಿಯೆಗಳು ಮತ್ತು ಅಂತರಿಕ್ಷದಲ್ಲಿ ಉಪಗ್ರಹಗಳು ಯಾವ ರೀತಿ ಅಧ್ಯಯನ ನಡೆಸುತ್ತವೆ ಎಂಬುದು ಸೇರಿದಂತೆ ಹತ್ತು ಹಲವಾರು ವಿಚಾರಗಳ ಮಾಹಿತಿಯನ್ನು ಈ ಕಾರ್ಯಕ್ರಮದ ಮೂಲಕ ಸಾರ್ವಜನಿಕರು, ವಿದ್ಯಾರ್ಥಿ ಸಮುದಾಯಕ್ಕೆ ಪ್ರಚುರಪಡಿಸಲಾಗುತ್ತದೆ. ಗಗನಯಾತ್ರಿಗಳು ಯಾವ ರೀತಿ ಭೂಮಿಯನ್ನು ಸುತ್ತುತ್ತಾರೆ, ಹೇಗೆ ಭೂಮಿಗೆ ಸುರಕ್ಷಿತವಾಗಿ ವಾಪಸ್ ಆಗುತ್ತಾರೆ ಎಂಬುದನ್ನು ಆಕಾಶ ಮಂದಿರ ಪ್ರದರ್ಶನದಲ್ಲಿ ಅನಿಮೇ ್ನ್‌ಗಳ ಮೂಲಕ ಕಟ್ಟಿಕೊಡಲಾಗುತ್ತದೆ.

ಆಕಾಶ ಮಂದಿರ ಪ್ರದರ್ಶನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಬೇಸ್ ಆಡಳಿತ ಮಂಡಳಿಯ ಅಧ್ಯಕ್ಷ ಹಾಗೂ ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್.ಕಿರಣ್ ಕುಮಾರ್ ಅಂತರಿಕ್ಷ ಕ್ಷೇತ್ರದಲ್ಲಿ ಭಾರತ ಸಶಕ್ತ ರಾಷ್ಟ್ರವಾಗಿ ಹೊರಹೊಮ್ಮಿದೆ. ಭಾರತ ಇಂದು ಮಾನವ ರಹಿತ ಉಪಗ್ರಹ, ರಾಕೆಟ್ ನೆರವಿನಿಂದ ಅಂತರಿಕ್ಷ ಕಾರ್ಯಕ್ರಮ ರೂಪಿಸಿದೆ. ಆದರೆ ಮಾನವ ಸಹಿತ ಕಾರ್ಯಕ್ರಮಕ್ಕೆ ಮೊದಲ ಹೆಜ್ಜೆ ಇಡುತ್ತಿದ್ದು, ಇದು ಭಾರತೀಯ ಅಂತರಿಕ್ಷ ಸಂಸ್ಥೆಗೆ ಹೊಸ ಆಯಾಮ ಸಿಗಲಿದೆ ಎಂದು ತಿಳಿಸಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಹೊರ ತಂದಿರುವ ಕಾನೂನು ವಿಭಾಗದ ಕೈಪಿಡಿಯನ್ನು ಶಾಸಕ ಎಸ್. ಸುರೇಶ್ ಕುಮಾರ್ ಬೆಂಗಳೂರಿನ ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ನಿನ್ನೆ ಬಿಡುಗಡೆ ಮಾಡಿದರು.

*******

ಬಿಸಿಲಿನ ತಾಪ ಹೆಚ್ಚಳ ಮತ್ತು ನೀರಿನ ಅಭಾವ ಪ್ರಾಣಿ, ಪಕ್ಷಿಗಳಿಗೂ ಕಾಡುತ್ತಿರುವ ಹಿನ್ನೆಲೆ, ಪಕ್ಷಿಗಳಿಗೂ ಜೀವ ಜಲ ನೀಡಲು ದಾವಣಗೆರೆ ಜಿಲ್ಲೆಯ ಎಲ್ಲಾ ಸರ್ಕಾರಿ ಕಟ್ಟಡಗಳ ಮೇಲೆ ಮಣ್ಣಿನಿಂದ ಮಾಡಿದ ಮಡಿಕೆ ಅಥವಾ ಪಾತ್ರೆಗಳಲ್ಲಿ ನೀರು ಶೇಖರಿಸಿಡಲು ಮತ್ತು ನೀರು ಕಡಿಮೆಯಾಗದಂತೆ ನೋಡಿಕೊಳ್ಳಲು ದಾವಣಗೆರೆ ಜಿಲ್ಲಾಧಿಕಾರಿ ಡಾಕ್ಟರ್ ವೆಂಕಟೇಶ್ ಎಲ್ಲ ಇಲಾಖೆ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

*******

ಬೇಸಿಗೆ ಮತ್ತು ಬರಗಾಲದ ಹಿನ್ನೆಲೆಯಲ್ಲಿ ಚಿಂಚೋಳಿ ವನ್ಯಜೀವಿ ವಲಯದ ಅರಣ್ಯ ಪ್ರದೇಶದಲ್ಲಿ ಕಾಡು ಪ್ರಾಣಿ ಮತ್ತು ಪಕ್ಷಿಗಳ ನೀರಿನ ದಾಹ ಇಂಗಿಸಲು ಕೃತಕ ನೀರಿನ ತೊಟ್ಟಿಗೆ ಅರಣ್ಯ ಇಲಾಖೆ ಟ್ಯಾಂಕರ್ ಮೂಲಕ ನೀರು ಪೂರೈಸುತ್ತಿದೆ.

*******

**ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಹಾಗೂ ಅಕ್ಷರ ದಾಸೋಹ ಕಾರ್ಯಕ್ರಮದಡಿ ದಾವಣಗೆರೆ ಸೇರಿದಂತೆ ರಾಜ್ಯದ ಎಲ್ಲ 31 ಕಂದಾಯ ಜಿಲ್ಲೆಗಳಲ್ಲಿ ಮಕ್ಕಳಲ್ಲಿ ಪೌಷ್ಟಿಕಾಂಶ ಕೊರತೆಯಾಗಬಾರದೆಂದು ಇದೇ ತಿಂಗಳ 11 ರಿಂದ ಮೇ 28 ರ ವರೆಗೆ ಭಾನುವಾರ ಹೊರತುಪಡಿಸಿ ನಿರಂತರವಾಗಿ 41 ದಿನಗಳ ಕಾಲ ಮಧ್ಯಾಹ್ನದ ಬಿಸಿಯೂಟ ನೀಡಲು ಸರ್ಕಾರ ಆದೇಶಿಸಿದೆ ಎಂದು ದಾವಣಗೆರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುರೇಶ್ ಇಟ್ನಾಳ್ ತಿಳಿಸಿದ್ದಾರೆ.**

*******

**ದಕ್ಷಿಣ ಕನ್ನಡ ಜಿಲ್ಲೆಯ ಕಡಬ ಪೊಲೀಸ್ ಠಾಣಾ ವ್ಯಾಪ್ತಿಯ ಬಿಳಿನೆಲೆ ಗ್ರಾಮದ ಮನೆಯೊಂದಕ್ಕೆ ಆರು ಮಂದಿ ಶಂಕಿತರು ಭೇಟಿ ನೀಡಿರುವ ಹಿನ್ನೆಲೆಯಲ್ಲಿ ಆ ಪ್ರದೇಶದಲ್ಲಿ ನಕ್ಸಲ್ ನಿಗ್ರಹ ಪಡೆ ತೀವ್ರ ಶೋಧ ಕಾರ್ಯ ಮುಂದುವರಿಸಿದೆ.**

*******